**ಬಂಟ್ವಾಳ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ**

ಸಿಸಿ ನಂ. 752/2023

ಫ್ರಾಸಾ : 01

ಚಾಸಾ : 01

| | | |
|---|---|---|
| ಹೆಸರು | : | ಉಮೇಶ್ |
| ತಂದೆಯ ಹೆಸರು | : | ಕೃಷ್ಣಪ್ಪ ಗೌಡ |
| ಫ್ರಾಯ | : | 38 ವರ್ಷ |
| ಉದ್ಯೋಗ | : | ಕೂಲಿ |
| ವಾಸಸ್ಥಳ | : | ಕಾಡಬೆಟ್ಟು, ಬಂಟ್ವಾಳ ತಾಲೂಕು |

ದಿಃ **02.07.2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1. ಮೃತ ಸೇಸಮ್ಮ ನನ್ನ ಮನೆಯ ಹತ್ತಿರದವರಾಗಿದು, ಪರಿಚಯಸ್ಥರಾಗಿದ್ದರು. ಆರೋಪಿಯನ್ನು ನಾನು ನೋಡಿರುವುದಿಲ್ಲ, ಇದೇ ಮೊದಲ ಬಾರಿಗೆ ಆರೋಪಿಯನ್ನು ನೋಡುತ್ತಿದ್ದೇನೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲ. ನಾನು ರಸ್ತೆಯಲ್ಲಿ ಹೋಗುತ್ತಿದ್ದಾಗ ಒಂದು ಅಪಘಾತ ಆಗಿತ್ತು. ಸದರಿ ಆ ಪಘಾತ ಯಾರ ತಪ್ಪಿನಿಂ ಆಗಿದೆ ಎಂದು ನನಗೆ ಗೊತ್ತಿಲ್ಲ. ನಾನು ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ಈ ಹಂತದಲ್ಲಿ ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆ ದೂರು ಆಗಿದ್ದು ಅದನ್ನು ನಿಪಿ–1 ಎಂದು, ಸಾಕ್ಷಿಯ ಸಹಿಯನ್ನು ನಿಪಿ–1(ಎ) ಎಂದು ಗುರುತಿಸಲಾಯಿತು. ನಿಪಿ–1 ಕ್ಕೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ

ಮಾಡಿರುತ್ತೇನೆ. ನಿ.ಪಿ. 1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ದೂರು ಕೊಟ್ಟಿರುವುದಿಲ್ಲ. ಸಾಕ್ಷಿಗೆ ಅಪಘಾತಕ್ಕೆ ಒಳಗಾದ ಕಾರಿನಂ ಭಾವಚಿತ್ರಗಳನ್ನು ತೋರಿಸಲಾಗಿ ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎಪಿಪಿಯವರಿಂದಃ –

3. ದಿಃ 16–05–2023 ರಂದು ಬೆಳಿಗ್ಗೆ 7.50 ರ ಸಮಯದಲ್ಲಿ ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿ ತನ್ನ ಬಾಬ್ತು ಕೆಎ–70–ಎಂ–4189 ರ ಕಾರನ್ನು ಕಡೂರು–ಬಂಟ್ವಾಳ ರಾಷ್ಟ್ರೀಯ ಹೆದ್ದಾರಿಯಲ್ಲಿ ಬೆಳ್ತಂಗಡಿ ಕಡೆಯಿಂದ ಬಿಸಿ ರೋಡ್ ಕಡೆಗೆ ದುಡುಕುತನ ಮತ್ತು ನಿರ್ಲಕ್ಷ್ಯತೆಯಿಂದ ಚಲಾಯಿಸಿಕೊಂಡು ಬಂದು ಬಂಟ್ವಾಳ ತಾಲೂಕಿನ ಕಾವಳ ಪಡೂರು ಗ್ರಾಮದ ಕಾರಿಂಜ ಕ್ರಾಸ್ ನಲ್ಲಿರುವ ಸೇರಾ ಕ್ಲಿನಿಕ್ ಹತ್ತಿರ ರಸ್ತೆ ಬದಯಲ್ಲಿ ನಡೇದುಲೊಂಡು ಬರುತ್ತಪಿದ್ದ ಪಾದಾಚಾರಿ ಸೇಸಮ್ಮ ರವರ ಹಿಂಭಾಗಕ್ಕೆ ಡಿಕ್ಕಿ ಹೊಡೇದು ಅಪಘಾತ ಪಡಿಸಿರುತ್ತಾರೇ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತದ ಪರಿಣಾಮ ಸೇಸಮ್ಮ ರವರು ತಲೆಯ ಹಿಂಭಾಗ ಜಜ್ಜಿದ ರಕ್ತಗಾಯ ಆಗಿದ್ದು, ನೆತ್ತಿಯ ಮೇಲೆ ಜಜ್ಜಿದ ರಕ್ತ ಗಾಯ, ಎಡ ಕೈಯಲ್ಲಿ ಸೀಳಿದ ರಕ್ತ ಗಾಯ, ಬಲ ಮತ್ತು ಎಡ ಕೈ ಗಳಲ್ಲಿ ಸೀಳಿದ ರಕ್ತ ಗಾಯ, 2 ಮೊಣಕಾಲು ಗಂಟಿನಲ್ಲಿ ತರಚಿದ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು, ವೈದ್ಯರು ಪರೀಕ್ಷಿಸಿ ಸದರಿ ಸೇಸಮ್ಮ ಮೃತಪಟ್ಟಿರುವುದಾಗಿ ತಿಳಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ, ಅಪಘಾತ ಆದ ಸಂದರ್ಬದಲ್ಲಿ ನಾನು ಸ್ಥಳದಲ್ಲಿ

ಹಾಜರಿದದ್ದು, ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿರುತ್ತೇನೆ ಎಂದರೆ ಸರಿಯಲ್ಲ. ಅದರಂತೇ ನಾನು ಪೋಲೀಸರಿಗೆ ನಿ.ಪಿ. 1 ರ ಪ್ರಕಾರ ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರಃ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,
ಬಂಟ್ವಾಳ